**ಕರ್ನಾಟಕ ಸರ್ಕಾರದ ನಡವಳಿ**

**ವಿಷಯ:** ಶ್ರೀ ಜಿ.ಎಸ್. ಪಾಟ್ನೇಕರ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ವಜ್ರಳ್ಳಿ ಗ್ರಾಮ ಪಂಚಾಯತ್, ಯಲ್ಲಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರ ವಿರುದ್ಧ ಲೋಕಾಯುಕ್ತ ವಿಚಾರಣೆ- ಅಂತಿಮ ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 36 ಇಎನ್‌ಕ್ಯೂ 2016, ದಿನಾಂಕ: 04.05.2016.
2. ಅಪರ ನಿಬಂಧಕರು, ವಿಚಾರಣೆಗಳು-9, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರವರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ:UPLOK-1 / DE/142/2016/ARE-9, ದಿನಾಂಕ: 21.08.2021.
3. ಮಾನ್ಯ ಉಪ ಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: UPLOK-1 /DE/142/2016/ARE-9, ದಿನಾಂಕ: 23.08.2021.
4. ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆರವರ ಅನಧಿಕೃತ ಟಿಪ್ಪಣಿ ಸಂಖ್ಯೆ: ಗ್ರಾಅಪ 90 ಇಎನ್‌ಕ್ಯೂ 2021, ದಿನಾಂಕ: 01.10.2021
5. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ 156 ಗ್ರಾಪಂಕಾ 2021, ದಿ:06.12.2021.
6. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ಉತ್ತರ ದಿನಾಂಕ: 01.01.2022.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ 1) ಶ್ರೀ ಎಸ್.ವಿ ಪುರಾಣಿಕ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ ಯಲ್ಲಾಪುರ (ಹಾಲಿ ನಿವೃತ್ತ) ಮತ್ತು 2) ಶ್ರೀ ಜಿ.ಎಸ್. ಪಾಟ್ನೇಕರ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ವಜ್ರಳ್ಳಿ ಗ್ರಾಮ ಪಂಚಾಯತ್, ಯಲ್ಲಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರ ವಿರುದ್ಧದ ಈ ಕೆಳಕಂಡ ಆರೋಪಗಳಿಗೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮವಳಿಗಳು 1957 ರ ನಿಯಮ 14-ಎ ರಡಿಯಲ್ಲಿ ಮಾನ್ಯ ಉಪ ಲೋಕಾಯುಕ್ತರಿಗೆ ವಹಿಸಲಾಗಿತ್ತು.

**" ದೋಷಾರೋಪಣೆ":-**

" **Charge No.1**: That, you Sri. S.V.Puranik- Assistant Executive Engineer, Panchayath Raj Engineering Sub Division, Yellapura, Uttara Kannada – DGO-1 and Sri.G.Patnekar-Panchayat Development Officer – Vajralli Grama Panchayath, Yellapura Taluk- DGO-2 While working in the said capacity have under taken the new road work between Kodlagadde road to Kumbri Kottige during 2011-22 in Forest Block Co.No. XXXIV -23, a reserved forest, in violation of Forest Act, without obtaining required permission to lay road in reserved forest area resulting in destruction of forest property;

**Charge No. 2:** And you DGO-2 has accorded permission on 9.10.2013 to Smt. Parvathi Venkataraman Bhat, Vajralli for manufacturing Cement bricks in the name and style "Nirman Cement Bricks" for the period 1.10.2013 to 31.3.2014 and for the period 1.4.2014 to 31.3.2015 in Sy.No.34/A1 Hissa-B of Vajralli even though Smt. Parvathi had not obtained NOC from Karnataka State Pollution Control Board.

**Charge No. 3:** You DGO No. 2 has allowed Nirman Cement Products to function even as on 14.8.2015 without there being required license from Karnataka State pollution Control Board.

Thereby you DGO 1 and 2 have failed to maintain absolute integrity and devotion to duty, the act of which is unbecoming of Government Servants and thereby committed misconduct as enumerated U/S 3(1) (i) to (iii) of Karnataka Civil Service (Conduct) Rules 1966."

ಮೇಲೆ ಓದಲಾದ ಕ್ರಮ ಸಂಖ್ಯೆ (2) ಮತ್ತು (3) ರಲ್ಲಿ 1) ಶ್ರೀ ಎಸ್.ವಿ ಪುರಾಣಿಕ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ ಯಲ್ಲಾಪುರ (ಹಾಲಿ ನಿವೃತ್ತ) ಮತ್ತು 2) ಶ್ರೀ ಜಿ.ಎಸ್. ಪಾಟ್ನೇಕರ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ವಜ್ರಳ್ಳಿ ಗ್ರಾಮ ಪಂಚಾಯತ್, ಯಲ್ಲಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರುಗಳ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತರವರು ಅಂಗೀಕರಿಸಿ, 1) ಶ್ರೀ ಎಸ್.ವಿ ಪುರಾಣಿಕ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ ಯಲ್ಲಾಪುರ (ಹಾಲಿ ನಿವೃತ್ತ) ಇವರಿಗೆ ಪ್ರಾಪ್ತವಾಗುವ ಪಿಂಚಣಿಯಲ್ಲಿ ಶೇ.5 ರಷ್ಟನ್ನು ಐದು (5) ವರ್ಷಗಳವರೆಗೆ ತಡೆಹಿಡಿಯುವ ಮತ್ತು 2) ಶ್ರೀ ಜಿ.ಎಸ್. ಪಾಟ್ನೇಕರ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ವಜ್ರಳ್ಳಿ ಗ್ರಾಮ ಪಂಚಾಯತ್, ಯಲ್ಲಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರಿಗೆ ಎರಡು ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಪರಿಣಾಮ ಸಹಿತವಾಗಿ ತಡೆಹಿಡಿಯುವ ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿ ಶ್ರೀ ಜಿ.ಎಸ್. ಪಾಟ್ನೇಕರ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ವಜ್ರಳ್ಳಿ ಗ್ರಾಮ ಪಂಚಾಯತ್, ಯಲ್ಲಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರಿಗೆ ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುವಂತೆ ದಂಡನೆ ವಿಧಿಸುವ ಬಗ್ಗೆ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತ ರವರ ಶಿಫಾರಸ್ಸಿನ ಪ್ರತಿಯೊಂದಿಗೆ ಕಳುಹಿಸಿಕೊಡಲಾಗಿರುತ್ತದೆ.

ಅದರಂತೆ ಮೇಲೆ ಓದಲಾದ ಕ್ರಮ ಸಂಖ್ಯೆ (5) ರಲ್ಲಿ ಶ್ರೀ ಜಿ.ಎಸ್. ಪಾಟ್ನೇಕರ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ವಜ್ರಳ್ಳಿ ಗ್ರಾಮ ಪಂಚಾಯತ್, ಯಲ್ಲಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರಿಗೆ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತ ರವರ ಶಿಫಾರಸ್ಸಿನ ಪ್ರತಿಯೊಂದಿಗೆ 2ನೇ ಕಾರಣ ಕೇಳುವ ನೋಟೀಸ್‌ನ್ನು ಜಾರಿಗೊಳಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (6) ರಲ್ಲಿ 2ನೇ ಕಾರಣ ಕೇಳುವ ನೋಟೀಸಿಗೆ ಆಪಾದಿತ ನೌಕರರು ಈ ಕೆಳಕಂಡಂತೆ ಸಮಾಜಾಯಿಷಿಯನ್ನು ಸಲ್ಲಿಸಿರುತ್ತಾರೆ.

" ನಾನು ಇಲಾಖೆಯಲ್ಲಿ ಕಳೆದ 22 ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದು, ಈ ನನ್ನ ಸೇವಾವಧಿಯಲ್ಲಿ ಕರ್ತವ್ಯವನ್ನು ಅತ್ಯಂತ ನಿಷ್ಠೆ ಹಾಗೂ ಪ್ರಾಮಾಣಿಕವಾಗಿ ಮೇಲಾಧಿಕಾರಿಗಳು ನೀಡುವ ಸಲಹೆ ಸೂಚನೆಗಳನ್ನು ಚಾಚು ತಪ್ಪದೇ ಪಾಲಿಸಿಕೊಂಡು ನಿರ್ವಹಿಸಿರುತ್ತೇನೆ.

ಮಾನ್ಯ ಉಪಲೋಕಾಯುಕ್ತರು ಈ ಪ್ರಕರಣದಲ್ಲಿ ಆರೋಪಿಸಿರುವಂತೆ ಯಾವುದೇ ಕರ್ತವ್ಯ ಲೋಪವೆಸಗಿರುವುದಿಲ್ಲ. ಉದ್ದಿಮೆ ಪರವಾನಿಗೆ ಪತ್ರವನ್ನು ಅಗತ್ಯ ದಾಖಲೆಗಳನ್ನು ಅರ್ಜಿದಾರರಿಂದ ಪಡೆದು, ಗ್ರಾಮ ಪಂಚಾಯಿತಿಯ ಸಾಮಾನ್ಯ ಸಭೆಯಲ್ಲಿ ಮಂಡಿಸಿ, ಆದ ನಿರ್ಣಯದಂತೆ ವಿತರಿಸಲಾಗಿರುತ್ತದೆ. ಆದುದರಿಂದ ಈ ಪ್ರಕರಣದಲ್ಲಿ ನನ್ನಿಂದ ಯಾವುದೇ ಕರ್ತವ್ಯ ಲೋಪವಾಗಿಲ್ಲದಿರುವುದರಿಂದ ನನ್ನನ್ನು ಈ ಪ್ರಕರಣದಿಂದ ಆರೋಪಮುಕ್ತಗೊಳಿಸಿ, ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುವ ದಂಡನೆಯನ್ನು ವಿಧಿಸದೇ ಸದರಿ ಪ್ರಕರಣವನ್ನು ಮುಕ್ತಾಯಗೊಳಿಸುವಂತೆ ಕೋರಿರುತ್ತಾರೆ."

ಆಪಾದಿತ ನೌಕರರು ಸಲ್ಲಿಸಿರುವ ಸಮಾಜಾಯಿಷಿಯನ್ನು ಪರಿಶೀಲಿಸಿದೆ. ಈ ಪ್ರಕರಣದ ಬಗ್ಗೆ ಅಪರ ನಿಬಂಧಕರು ವಿಚಾರಣೆಗಳು-9, ಕರ್ನಾಟಕ ಲೋಕಾಯುಕ್ತರವರು ಇಲಾಖಾ ವಿಚಾರಣೆ ನಡೆಸಿ, ಸಲ್ಲಿಸಿರುವ ವಿಚಾರಣಾ ವರದಿಯಲ್ಲಿ ಆಪಾದಿತ ನೌಕರರ ವಿರುದ್ಧ ಆರೋಪವು ಸಾಬೀತಾಗಿರುವುದಕ್ಕೆ ಸಂಬಂಧಿಸಿದಂತೆ ವಿವರವಾಗಿ ವರದಿಯಲ್ಲಿ ತಿಳಿಸಿರುತ್ತಾರೆ. ಮಾನ್ಯ ಉಪ ಲೋಕಾಯುಕ್ತರವರ ವಿಚಾರಣೆಯಲ್ಲಿಯೂ ಕೂಡ ಎದುರುದಾರರು ತಮ್ಮ ಮೇಲಿನ ಆರೋಪಗಳಲ್ಲಿ ಯಾವುದೇ ಹುರುಳಿಲ್ಲವೆಂದು ಸಮರ್ಥಿಸಿಕೊಳ್ಳಲು ವಿಫಲರಾಗಿರುತ್ತಾರೆ ಹಾಗೂ ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿದ್ದು, ಮಾನ್ಯ ಉಪಲೋಕಾಯುಕ್ತರವರು ವಿಚಾರಣಾ ವರದಿಯನ್ನು ಅಂಗೀಕರಿಸಿ, ಆರೋಪದ ತೀವ್ರತೆಗೆ ಅನುಗುಣವಾಗಿ ಶ್ರೀ ಜಿ.ಎಸ್. ಪಾಟ್ನೇಕರ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ವಜ್ರಳ್ಳಿ ಗ್ರಾಮ ಪಂಚಾಯತ್, ಯಲ್ಲಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರಿಗೆ " ಎರಡು ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಪರಿಣಾಮ ಸಹಿತವಾಗಿ ತಡೆಹಿಡಿಯುವ " (Imposing penalty of withholding two annual increments payable to DGO Sri G.S Patnekar with cumulative effect) ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ವಿಚಾರಣಾಧಿಕಾರಿಯವರು ಆಪಾದನೆಯನ್ನು ಸಾಬೀತುಪಡಿಸಲು ತಮ್ಮ ವರದಿಯಲ್ಲಿ ವಿವರವಾದ ಕಾರಣಗಳನ್ನು ನೀಡಿರುತ್ತಾರೆ. ಸದರಿ ಕಾರಣಗಳು ಸಮರ್ಥನೀಯವಾಗಿದ್ದು, ಆಪಾದಿತ ನೌಕರರ ಸಮಜಾಯಿಸಿಯನ್ನು ಒಪ್ಪಲು ಸಾಧ್ಯವಿರುವುದಿಲ್ಲ. ಆದುದರಿಂದ, ಸರ್ಕಾರವು ವಿಚಾರಣಾ ವರದಿ ಹಾಗೂ ಮಾನ್ಯ ಉಪಲೋಕಾಯುಕ್ತರವರ ಶಿಫಾರಸ್ಸನ್ನು ಪರಿಶೀಲಿಸಿ, ಶ್ರೀ ಜಿ.ಎಸ್. ಪಾಟ್ನೇಕರ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ವಜ್ರಳ್ಳಿ ಗ್ರಾಮ ಪಂಚಾಯತ್, ಯಲ್ಲಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರಿಗೆ ಮಾನ್ಯ ಉಪಲೋಕಾಯುಕ್ತರವರು ಶಿಫಾರಸ್ಸು ಮಾಡಿರುವಂತೆ " ಎರಡು ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಪರಿಣಾಮ ಸಹಿತವಾಗಿ ತಡೆಹಿಡಿಯುವ " (Imposing penalty of withholding two annual increments payable to DGO Sri G.S Patnekar with cumulative effect) ದಂಡನೆಯನ್ನು ವಿಧಿಸಲು ನಿರ್ಣಯಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 156 ಗ್ರಾಪಂಕಾ 2021, ಬೆಂಗಳೂರು, ದಿನಾಂಕ:-12.04.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಜಿ.ಎಸ್. ಪಾಟ್ನೇಕರ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ವಜ್ರಳ್ಳಿ ಗ್ರಾಮ ಪಂಚಾಯತ್, ಯಲ್ಲಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರ ವಿರುದ್ಧದ ಆರೋಪಗಳು ವಿಚಾರಣೆಯಲ್ಲಿ ಸಾಬೀತಾಗಿರುವುದರಿಂದ ಕರ್ನಾಟಕ ನಾಗರೀಕ ಸೇವಾ (ಸಿಸಿಎ) ನಿಯಮಾವಳಿಗಳು 1957 ನಿಯಮ 8 (iii) ರನ್ವಯ " ಎರಡು ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಪರಿಣಾಮ ಸಹಿತವಾಗಿ ತಡೆಹಿಡಿಯುವ " (Imposing penalty of withholding two annual increments payable to DGO Sri G.S Patnekar with cumulative effect) ದಂಡನೆಯನ್ನು ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

12/4/22
*(ರಾಜು ಎಂ.ಎಂ)*
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಅಪರ ನಿಬಂಧಕರು-9, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಉತ್ತರಕನ್ನಡ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಯಲ್ಲಾಪುರ , ಉತ್ತರಕನ್ನಡ ಜಿಲ್ಲೆ.
   ಶ್ರೀ ಜಿ.ಎಸ್. ಪಾಟ್ನೇಕರ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ವಜ್ರಳ್ಳಿ ಗ್ರಾಮ ಪಂಚಾಯತ್, ಯಲ್ಲಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ **(ಇವರಿಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ ಯಲ್ಲಾಪುರ, ಉತ್ತರಕನ್ನಡ ಜಿಲ್ಲೆ ಇವರ ಮುಖಾಂತರ)**
6. ಗಣಕ ಕೋಶ, ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ/ಪ್ರತಿ.